ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):- ಮಾನ್ಯ ಅಧ್ಯಕ್ಷರೇ, "2003ರ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ".

ಅಧ್ಯಕ್ಷರು:- ಅನುಬಂಧ 6. ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ 6.

(v) ಕರ್ನಾಟಕ ಸ್ಟ್ಯಾಂಪ್ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 2003.

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):- ಮಾನ್ಯ ಅಧ್ಯಕ್ಷರೇ,"2003ರ ಕರ್ನಾಟಕ ಸ್ಟ್ಯಾಂಪ್ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ".

ಅಧ್ಯಕ್ಷರು:- ಪ್ರಸ್ತಾಪ ಏನೆಂದರೆ"2003ರ ಕರ್ನಾಟಕ ಸ್ಟ್ಯಾಂಪ್ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು". ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):- ಮಾನ್ಯ ಅಧ್ಯಕ್ಷರೇ, "2003ರ ಕರ್ನಾಟಕ ಸ್ಟ್ಯಾಂಪ್ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ)ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ಅನುಬಂಧ 7. ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ 7.

(vi) ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ, 2003.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೇ, "2003ರ ಕರ್ನಾಟಕ ತೆರಿಗೆ ಕಾನೂನುಗಳು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ "2003ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್. ಎಂ. ಕೃಷ್ಣ (ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೇ "2003ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು:- ಅನುಬಂಧ 8. ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ 8.

(vii) ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕ, 2003.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೇ "2003ರ ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ".

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ "2003 ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೇ "2003ರ ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು:- ಅನುಬಂಧ 9. ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ 9.

ಆ. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

(i) 2003ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕ

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೇ, " 2003ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು:- ಈಗ ಪ್ರಸ್ತಾವ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ, "2003ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು:

ಖಂಡ 2 ರಿಂದ 3ರ ವರೆಗೆ:

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ:-

"ಖಂಡ 2 ರಿಂದ 3ರ ವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3 ರ ವರೆಗೆ, ಎರಡೂ ಸೇರಿದಂತೆ ವಿಧೇಯಕಕ್ಕೆ, ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೇ, "2003ನೇ ಸಾಲಿನ ಧನ ವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"2003ನೇ ಸಾಲಿನ ಧನ ವಿನಿಯೋಗ ವಿಧೇಯಕವನ್ನು ಅಂಗೀಕರಿಸುವುದು".